**ಇಂದು ದಿನಾಂಕಃ 19-01-2024 ರಂದು ಸಾಕ್ಷಿಯನ್ನ ಕರೆಯಿಸಿ ಪ್ರಮಾಣ ವಚನಬೋದಿಸಲಾಯಿತು.**

ನಾನು ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳು ಎಲ್ಲವೂ ಸತ್ಯವಾಗಿರುತ್ತವೆ.

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಶ್ರೀ. ಜೆ. ಎಸ್. ಎಂ. ವಕೀಲರಿಂದಃ**

ಏನು ಇಲ್ಲವೆಂದು ಹೇಳಿರುತ್ತಾರೆ.

**ಪಾಟೀಸವಾಲುಃ** 1 ನೇ ಎದುರುದಾರರ ಪರ ಶ್ರೀ ಎಸ್. ಬಿ. ಜಿ. ವಕೀಲರಿಂದ ಶ್ರೀ. ಎಸ್. ಆರ್. ಬಿ. ವಕೀಲರ ಪರವಾಗಿಃ

ಚಿಕ್ಕಮಾಗಡಿ ಕೆರೆ ಏರಿಯ ಮೇಲೆ ಅಪಘಾತವಾಗಿರುತ್ತದೆ. ನನ್ನ ತಪ್ಪಿನಿಂದಲೇ ಅಪಘಾತವಾಗಿರುತ್ತದೆ ಎಂದರೆ ಸರಿಯಲ್ಲ. ನಾನು ವಾಹನವನ್ನು ಅತೀ ಜೋರಿನಿಂದ ಚಲಾಯಿಸುತ್ತಿದ್ದೆ ಎಂದರೆ ಸರಿಯಲ್ಲ. ಅಪಘಾತದಿಂದ ನನಗೆ ಯಾವುದೇ ಗಾಯವಾಗಿಲ್ಲ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ನನಗೆ ಮೂಳೆ ಮುರಿತ ಆಗಿಲ್ಲ ಎಂದರೆ ಸರಿಯಲ್ಲ. ಚಿಕಿತ್ಸೆಯ ಸಲುವಾಗಿ 2 ಲಕ್ಷ ರೂ.ಗಳನ್ನು ಖರ್ಚು ಮಾಡಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅನುಸರಣಾ ಚಿಕಿತ್ಸೆಗೆ 1 ಲಕ್ಷ ರೂ. ಬೇಕಾಗಿರುತ್ತದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ಕಾರಿನ ಚಾಲಕನಿಗೆ ಡಿ ಎಲ್ ಇದ್ದು, ಸದರಿ ಕಾರು ವಿಮೆಗೆ ಒಳಪಟ್ಟಿತ್ತು ಎನ್ನುವುದು ನಿಜ. ಸದರಿ ಕಾರಣದಿಂದ 1 ನೇ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರು ಅಲ್ಲ ಎಂದರೆ ಸರಿಯಲ್ಲ. 2 ನೇ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರು ಎನ್ನುವುದು ನಿಜ.

**ಪಾಟೀಸವಾಲುಃ** 2 ನೇ ಎದುರುದಾರರ ಪರ ಶ್ರೀ ಪಿ. ಎಚ್. ಪಿ. ವಕೀಲರಿಂದಃ ಪಾಟೀ ಸವಾಲಿಗೆ ಕಾಲಾವಕಾಶವನ್ನು ಕೋರಿದ್ದು, ಆದರೆ 2 ನೇ ಎದುರುದಾರರು ತಕರಾರನ್ನು ಸಲ್ಲಿಸದೇ ಇರುವುದರಿಂದ ಹಾಗೂ ಯಾವುದೇ ಸಕಾರಣಗಳು ಇಲ್ಲದ ಕಾರಣ ಕೋರಿಕೆಯನ್ನು ತಿರಸ್ಕರಿಸಿ ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು)

ಓ ಹೆ ಕೆ ಸರಿ ಇದೆ ಎಂದು ಒಪ್ಪಿರುತ್ತಾರೆ.

ದಿನಾಂಕಃ 19-01-2024

Sd/-
ಹಿರಿಯ ಸಿ ಜೆ ಮತ್ತು ಜೆ. ಎಂ.ಎಫ್. ಸಿ
ಹಿರೇಕೆರೂರು